## ರಾಜ್ಯದಲ್ಲಿ ಮಾದಕವಸ್ತು ಹಾವಳಿಗೆ ಕಡಿವಾಣ ಹಾಕಲು ಕ್ರಮ: ಗೃಹ ಸಚಿವ ಡಾ.ಜಿ.ಪರಮೇಶ್ವರ್

# ಕರ್ನಾಟಕ ಪಂಜಾಬ್ ಆಗಲು ಬಿಡುವುದಿಲ್ಲ

■ **ವಿಕ ಸುದ್ದಿಲೋಕ** ಬೆಂಗಳೂರು

ಯಾವುದೇ ಕಾರಣಕ್ಕೂ ಮಾದಕ ವಸ್ತುಗಳ ವಿಷಯದಲ್ಲಿ ಕರ್ನಾಟಕವನ್ನು ಮತ್ತೊಂದು ಪಂಜಾಬ್ ಆಗಲು ನಾವು ಬಿಡುವುದಿಲ್ಲ. ಸಾರ್ವಜನಿಕರು ಕೂಡ ಇದಕ್ಕೆ ಆಸ್ಪದ ನೀಡಬಾರದು. ಎಲ್ಲರೂ ಒಗ್ಗೂಡಿ ಮಾದಕ ದ್ರವ್ಯ ಮುಕ್ತ ಕರ್ನಾಟಕ ಕಟ್ಟಬೇಕಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ದಿಶಾಭೋದ್ ಫೌಂಡೇಶನ್ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಸಹಯೋಗದಲ್ಲಿ ಬುಧವಾರ ಆಯೋಜಿಸಿದ್ದ 'ನಶಾಮುಕ್ತ ಭಾರತ, ನಶಾಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್' ಹಾಗೂ ಅಂಗಾಂಗ ದಾನ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

''ರಾಜ್ಯವನ್ನು ಸಂಪೂರ್ಣ ನಶಾಮುಕ್ತಗೊಳಿಸಲು ರಾಜ್ಯ ಸರಕಾರ ಈಗಾಗಲೇ ಗಂಭೀರ ಚಿಂತನೆ ನಡೆಸಿದೆ. ಸರಕಾರದ ಮಟ್ಟದಲ್ಲಿ ಇದನ್ನು ನಿಗ್ರಹಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಉನ್ನತ ಶಿಕ್ಷಣ ಸಚಿವರಿಗೂ ಸೂಚನೆ ನೀಡಲಾಗುವುದು,'' ಎಂದರು.

''ರಾಜೀವ್ ಗಾಂಧಿ ವಿಶ್ವವಿದ್ಯಾಲಯದಡಿ ಸುಮಾರು 1500 ಆರೋಗ್ಯ ವಿಜ್ಞಾನಗಳ



ಕಾಲೇಜುಗಳು ಕಾರ್ಯನಿರ್ವಹಿಸುತ್ತವೆ. ಮಾದಕ ವಸ್ತು ವಿರೋಧಿ ಸಮಿತಿಗಳನ್ನು ರಚಿಸುವಂತೆ ವಿಶ್ವವಿದ್ಯಾಲಯ ಈ ಎಲ್ಲಾ ಕಾಲೇಜುಗಳಿಗೆ ಖಡಕ್ ಸೂಚನೆ ನೀಡಬೇಕು. ಇದನ್ನು ಗಂಭೀರವಾಗಿ ಪರಿಗಣಿಸದ ಕಾಲೇಜುಗಳ ಪರವಾನಗಿಗಳನ್ನು ರದ್ದುಗೊಳಿಸಬೇಕು,'' ಎಂದು ಸೂಚಿಸಿದರು.

''ರಾಜ್ಯದಲ್ಲಿ ನೂರಾರು ಕೋಟಿ ರೂ. ಮೌಲ್ಯದ ಡ್ರಗ್ಸ್ ಜಪ್ತಿಯಾಗುತ್ತಲೇ ಇದೆ. ಹೀಗೆ ಜಪ್ತಿಯಾಗುವ ಡ್ರಗ್ ಅನ್ನು ಸುಟ್ಟು ಹಾಕುವ ಮೂಲಕ ನಾಶಪಡಿಸಲಾಗುತ್ತಿದೆ. ಆದರೂ ಮತ್ತೆ ಅಷ್ಟೇ ಪ್ರಮಾಣದ ಮಾದಕ ವಸ್ತುಗಳು ರಾಜ್ಯವನ್ನು ಪ್ರವೇಶಿಸುತ್ತಿರುವುದು ಆತಂಕ ಹುಟ್ಟಿಸಿದೆ. ವಿದೇಶಿ ವಿದ್ಯಾರ್ಥಿಗಳ ಸೋಗಿನಲ್ಲಿ ಬಂದು ಮಾದಕ ವಸ್ತುಗಳ ಮಾರಾಟ ಮಾಡುವವರ ಮೇಲೆ ಸರಕಾರ ಕಣ್ಣಿಟ್ಟಿದೆ,'' ಎಂದು ಮಾಹಿತಿ ನೀಡಿದರು.

''ರಾಜ್ಯದ ಸರಕಾರಿ ಬಸ್ಸುಗಳ ಮೇಲೆ ಮಾದಕ ವಸ್ತುಗಳ ವ್ಯಸನದ ಬಗ್ಗೆ ಜಾಗೃತಿ ಹಾಗೂ ಅಂಗಾಂಗ ದಾನದ ಮಹತ್ವ ಸಾರುವ ಸಂದೇಶಗಳನ್ನು ಹಾಕುವ ಕುರಿತು ರಾಜ್ಯದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರೊಂದಿಗೆ ಚರ್ಚಿಸಲಾಗಿದೆ,'' ಎಂದು ಹೇಳಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ''ಕರ್ನಾಟಕದ ಪ್ರತಿ ಮನೆಯೂ ಧೂಮಪಾನ ಮುಕ್ತ ಮದ್ಯಪಾನ ಮುಕ್ತವಾಗಬೇಕು. ಮಾದಕ ವಸ್ತುಗಳ ಸೇವನೆಯನ್ನು ತಡೆಯುವ ಕೆಲಸ ಮೊದಲು ಮನೆಯಿಂದ ಆರಂಭವಾಗಬೇಕು. ಪತ್ನಿ, ತಾಯಿ, ಅಕ್ಕ-ತಂಗಿಯರು ಇದನ್ನು ತಡೆಯಬೇಕು,'' ಎಂದರು.

ಕುಲಪತಿ ಡಾ.ಬಿ.ಸಿ. ಭಗವಾನ್ ಮಾತನಾಡಿದರು. ಶಾಸಕ ರಿಜ್ವಾನ್ ಅರ್ಷದ್, ಎನ್‌ಸಿಬಿ ವಲಯ ನಿರ್ದೇಶಕ ಸಚಿನ್ ಘೋರ್ಪಡೆ, ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಉಪಸ್ಥಿತರಿದ್ದರು.

### ಇನ್ನಷ್ಟು ಅಂಗಾಂಗ ಶೇಖರಣೆ ಕೇಂದ್ರ

''ರಾಜ್ಯದ ಸರಕಾರಿ ಆಸ್ಪತ್ರೆಗಳಲ್ಲಿ ಅಂಗಾಂಗ ಸಂಗ್ರಹ ಕಸಿ ಹಾಗೂ ಅಂಗಾಂಗ ಶೇಖರಣಾ ಘಟಕಗಳನ್ನು ಹೆಚ್ಚು ಹೆಚ್ಚು ಸ್ಥಾಪಿಸಲು ಮತ್ತು ಈಗಾಗಲೇ ಇರುವ ಕೇಂದ್ರಗಳಿಗೆ ಹೆಚ್ಚಿನ ಉತ್ತೇಜನ ನೀಡಲು ಸರಕಾರ ಗಂಭೀರ ಚಿಂತನೆ ನಡೆಸಿದೆ,'' ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು. ''ಅಂಗಾಂಗ ದಾನ ಪ್ರತಿಜ್ಞೆಯಲ್ಲಿ ಕರ್ನಾಟಕ ದೇಶದಲ್ಲಿ ಮೂರನೇ ಸ್ಥಾನದಲ್ಲಿದೆ. ಈ ಸಂಖ್ಯೆಯನ್ನು ಹೆಚ್ಚಿಸಲು ಸಾಮೂಹಿಕ ಪ್ರಯತ್ನ ಹಾಗೂ ಮನಸ್ಥಿತಿಯಲ್ಲಿ ಬದಲಾವಣೆ ಬಹಳ ಮುಖ್ಯ. ತಮ್ಮವರನ್ನು ಕಳೆದುಕೊಂಡ ಸಂಕಟದಲ್ಲಿರುವ ಕುಟುಂಬಸ್ಥರು ಅಂಗಾಂಗ ದಾನದ ಬಗ್ಗೆ ತೀರ್ಮಾನ ಕೈಗೊಳ್ಳುವುದು ಬಹಳ ಸೂಕ್ಷ್ಮ ಸಂಗತಿ. ಅಂತಹ ಸಂದರ್ಭದಲ್ಲಿಯೂ ಅಂಗಾಂಗ ದಾನ ಮಾಡಿ. ಪರೋಪಕಾರ ಮೆರೆಯುವ ಕುಟುಂಬಗಳನ್ನು ಗುರುತಿಸಿ ಸರಕಾರದಿಂದ ಸನ್ಮಾನ ಮಾಡುವ ಕೆಲಸ ಮಾಡಲಾಗುತ್ತಿದೆ,'' ಎಂದು ಹೇಳಿದರು.